ಪಂಚಾಯತಿಗೆ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪಂಚಾಯತ್ ರಾಜ್ ಇಂಜನೀಯರಿಂಗ್ ಇಲಾಖೆಯಿಂದ ಕೈಗೊಳ್ಳಲು ತೀರ್ಮಾನಿಸಿದೆ. ಹಾಗೂ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ, ಮೈಸೂರು ರವರಿಗೆ ಬಿಡುಗಡೆ ಮಾಡಲಾದ ಅನುದಾನವನ್ನು ಜಿಲ್ಲಾ ಪಂಚಾಯತ್‌ಗೆ ಹಿಂತಿರುಗಿಸಲು ವರದಿಯಾಗಿರುತ್ತದೆ.

ಜಿಲ್ಲಾ ಪಂಚಾಯತ್‌ಗೆ ನೂತನ ಕಛೇರಿ ಕಟ್ಟಡ ನಿರ್ಮಾಣದ ಬಗ್ಗೆ ನೀಲಿ ನಕ್ಷೆ ತಯಾರಿಸಲು ಪ್ರಧಾನ ವಾಸ್ತು ಶಿಲ್ಪಿಗಳು (PWD) ಬೆಂಗಳೂರು ರವರಿಗೆ ಕೋರಿದ್ದು, ನೀಲಿ ನಕ್ಷೆ ತಯಾರಿಸಿ ಸಲ್ಲಿಸಲಾಗಿರುತ್ತದೆ. ಪ್ರಸಕ್ತ ಕರ್ನಾಟಕ ಗೃಹ ಮಂಡಳಿ, ಮೈಸೂರು ವಿಭಾಗ, ಮೈಸೂರು ಇವರು ₹ 18.25 ಕೋಟಿಗೆ ರೇಖಾ ಅಂದಾಜು ಪಟ್ಟಿ ತಯಾರಿಸಿದ್ದು, ಅನುಮೋದಿತ ನೀಲಿ ನಕ್ಷೆಗೆ ಅನುಗುಣವಾಗಿ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಲು ಕರ್ನಾಟಕ ಗೃಹ ಮಂಡಳಿ, ಮೈಸೂರು ವಿಭಾಗ, ಮೈಸೂರು ಇವರಿಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಡಗು ಇವರು ವರದಿ ಮಾಡಿರುತ್ತಾರೆ.

ಕೊಡಗು ಜಿಲ್ಲೆಯ ಪ್ರವಾಸಿ ತಾಣ

221 (650), ಶ್ರೀ ಕೆ.ಜಿ.ಬೋಪಯ್ಯ (ವಿರಾಜಪೇಟೆ)

ಅ) ಕೊಡಗು ಜಿಲ್ಲೆಯ ಪ್ರವಾಸಿ ತಾಣವೆಂದು ಪರಿಗಣಿಸಲ್ಪಟ್ಟಿದೆಯೇ; ಹಾಗಿದ್ದಲ್ಲಿ, ಎಷ್ಟು ಕೇಂದ್ರಗಳನ್ನು ಪ್ರವಾಸಿ ಕೇಂದ್ರಗಳೆಂದು ಗುರುತಿಸಲಾಗಿದೆ (ವಿವರ ಒದಗಿಸುವುದು);

ಆ) 2013–14 ಹಾಗೂ 2014–15ನೇ ಸಾಲಿನಲ್ಲಿ ಪ್ರವಾಸಿಗರ ಮೂಲಭೂತ ಸೌಕರ್ಯ, ರಸ್ತೆ ಇತ್ಯಾದಿಗಳನ್ನು ಒಳಗೊಂಡಂತೆ

ಎಷ್ಟು ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ (ಪೂರ್ಣ ವಿವರ ಒದಗಿಸುವುದು)

ಇ) ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ (ವಿವರ ಒದಗಿಸುವುದು); ಅನುಮೋದನೆಗೊಂಡಿರುವ ಕಾಮಗಾರಿಗಳು ಯಾವ ಹಂತದಲ್ಲಿದೆ (ವಿವರ ಒದಗಿಸುವುದು)?

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು)

ಅ) ಕೊಡಗು ಜಿಲ್ಲೆಯಲ್ಲಿ ಈ ಕೆಳಕಂಡ ಕೇಂದ್ರಗಳನ್ನು ಪ್ರವಾಸಿ ಕೇಂದ್ರಗಳೆಂದು ಗುರುತಿಸಲಾಗಿದೆ;

1. ಮಡಿಕೇರಿ	2. ಅಬ್ಬಿಫಾಲ್ಸ್
3. ತಲಕಾವೇರಿ	4. ನಾಲ್ಕುನಾಡು
5. ಭಾಗಮಂಡಲ	6. ಓಂಕಾರೇಶ್ವರ ದೇವಸ್ಥಾನ
7. ಕಕ್ಕಬ್ಬೆ	8. ಶ್ರೀ ಇಗ್ಗುತ್ತಪ್ಪ
9. ಹಾರಂಗಿ ಜಲಾಶಯ	10. ಕೂಡಿಗೆ
11. ಚಟ್ಟಳ್ಳಿ ನಿಸರ್ಗಧಾಮ	12. ನಾಗರಹೊಳೆ
13. ಇರ್ಪು	14. ಕುಂದಾಡ ಬೆಟ್ಟ

ಆ) 2013–14ನೇ ಸಾಲಿನ ನಬಾರ್ಡ್–19ರಲ್ಲಿ ಈ ಕೆಳಕಂಡ ಕೂಡು ರಸ್ತೆ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ. ವಿವರ ಕೆಳಕಂಡಂತಿದೆ:

(₹ ಲಕ್ಷಗಳಲ್ಲಿ)

ಕಾಮಗಾರಿಯ ಹೆಸರು	ಅಂದಾಜು ಮೊತ್ತ	ಬಿಡುಗಡೆ ಮಾಡಿರುವ ಮೊತ್ತ
ಮಡಿಕೇರಿಯ ಕಬ್ಬೆ ಹಿಲ್ಸ್‌ನಿಂದ ಛಾಯಾಧಾರವರೆಗಿನ ಕೂಡು ರಸ್ತೆ	300.00	200.00

2014–15ನೇ ಸಾಲಿನ ಬಂಡವಾಳ ವೆಚ್ಚಗಳ ಯೋಜನೆಯಡಿ ಮಂಜೂರಾಗಿರುವ ಯೋಜನೆಗಳ ವಿವರ ಕೆಳಕಂಡಂತಿರುತ್ತದೆ:

(₹ ಲಕ್ಷಗಳಲ್ಲಿ)

ಕ್ರ. ಸಂ.	ಕಾಮಗಾರಿಯ ಹೆಸರು	ಅಂದಾಜು ಮೊತ್ತ	ಬಿಡುಗಡೆ ಮಾಡಲು ಕಾಯ್ದಿರಿಸಿದ ಮೊತ್ತ
1.	ಸೋಮವಾರಪೇಟೆ ತಾಲ್ಲೂಕು ಮಲ್ಲಳ್ಳಿ ಜಲಪಾತ ಪ್ರದೇಶದಲ್ಲಿ ಬಾಕಿ ಇರುವ ಮೆಟ್ಟಿಲುಗಳ ನಿರ್ಮಾಣ, ರೈಲಿಂಗ್ಸ್, ಪಾರ್ಕಿಂಗ್, ಮಳಿಗೆ ಮುಂತಾದ ಸೌಲಭ್ಯಗಳ ನಿರ್ಮಾಣ	200.00	40.00
2.	ಮಡಿಕೇರಿ ತಾಲ್ಲೂಕು, ಅಬ್ಬಿ ಜಲಪಾತ ಪ್ರದೇಶದಲ್ಲಿ ಪ್ಲಾಟ್ ಫಾರಂ, ರೈಲಿಂಗ್ಸ್, ಪಾಥ್ ವೇ/ಮೆಟ್ಟಿಲು ದುರಸ್ಥಿ, ಚೈನ್ ಲಿಂಕ್ ಮೆಶ್ ಮುಂತಾದ ಪ್ರವಾಸಿ ಸೌಲಭ್ಯಗಳ ಅಭಿವೃದ್ಧಿ	100.00	20.00
	ಒಟ್ಟು	**300.00**	**60.00**

ಇ) 2013–14ನೇ ಸಾಲಿನಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗೆ ದಿನಾಂಕ:10.11.2014ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ, ₹ 200.00 ಲಕ್ಷಗಳನ್ನು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಕೊಡಗು ವಿಭಾಗ, ಮಡಿಕೇರಿ ರವರಿಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

2014–15ನೇ ಸಾಲಿನ ಕಾಮಗಾರಿಗಳು ಅಕ್ಟೋಬರ್–2014ರ ಅಂತ್ಯದಲ್ಲಿ ಅನುಮೋದನೆಗೊಂಡಿದ್ದು, ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಅಂದಾಜು ಪಟ್ಟಿಗಳನ್ನು ತಯಾರಿಸಿ ಸಲ್ಲಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಬೆಂಗಳೂರು ರವರಿಗೆ ಪತ್ರ ಬರೆಯಲಾಗಿದ್ದು, ಅಂದಾಜು ಪಟ್ಟಿಗಳು ಸ್ವೀಕೃತವಾದ ಕೂಡಲೇ ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.